RNU AIR DHARWAD

# SEPTEMBER 19, 2024
# ALL INDIA RADIO- DHARWAD
# PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಮಾದಕ ಪದಾರ್ಥಗಳ ಮಾರಾಟ ಜಾಲದ ಮೂಲೋತ್ಪಾಟನೆಗೆ, ತುರ್ತು ಕಾರ್ಯಪಡೆ ರಚನೆ – ಮುಖ್ಯಮಂತ್ರಿ ಸಿದ್ದರಾಮಯ್ಯ.

- ಬಾಹ್ಯಾಕಾಶ ಉದ್ಯಮ ಯೋಜನೆಗಳಲ್ಲಿ, ನವೋದ್ಯಮಗಳಿಗೆ ಆದ್ಯತೆ – ಮಾಹಿತಿ ಮತ್ತು ತಂತ್ರಜ್ಞಾನ ಖಾತೆ ಸಚಿವ, ಪ್ರಿಯಾಂಕ್ ಖರ್ಗೆ.

- ಸ್ವಚ್ಛತೆಯೇ ಸೇವೆ ಆಂದೋಲನ; ರಾಜ್ಯದ ವಿವಿಧೆಡೆ ಪಾಕ್ಷಿಕ ಅಭಿಯಾನಕ್ಕೆ ಚಾಲನೆ.

- 'ಒಂದು ದೇಶ–ಒಂದು ಚುನಾವಣೆ', 'ಕೋವಿಂದ್ ಸಮಿತಿ ವರದಿ'ಗೆ, ಕೇಂದ್ರ ಸಚಿವ ಸಂಪುಟ ಅನುಮೋದನೆ.

ಈಗ ವಾರ್ತೆಗಳ ವಿವರ

*******

ರಾಜ್ಯದಲ್ಲಿ ಮಾದಕ ಪದಾರ್ಥಗಳ ಮಾರಾಟ ಮತ್ತು ಸೇವನೆ ಜಾಲದ ಮೂಲೋತ್ಪಾಟನೆಗೆ ತುರ್ತು ಕಾರ್ಯಪಡೆ ರಚಿಸಲಾಗಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಗೃಹ ಖಾತೆ ಸಚಿವ ಪರಮೇಶ್ವರ್ ನೇತೃತ್ವದಲ್ಲಿ, ವಿಶೇಷ ಕಾರ್ಯಪಡೆ ರಚಿಸಲಾಗಿದ್ದು, ಅಗತ್ಯ ಕಾರ್ಯತಂತ್ರ ರೂಪಿಸಲು, ಸೂಚಿಸಲಾಗಿದೆ ಎಂದರು.

ವಿಶೇಷ ಕಾರ್ಯಪಡೆಯಲ್ಲಿ ಆರೋಗ್ಯ, ಶಿಕ್ಷಣ, ವೈದ್ಯಕೀಯ ಶಿಕ್ಷಣ ಖಾತೆ ಸಚಿವರು ಇರಲಿದ್ದಾರೆ. ಪ್ರಸ್ತುತ ಕಾನೂನಿಗೆ ತಿದ್ದುಪಡಿ ಅಥವಾ ಹೊಸ ಕಾನೂನು ರಚಿಸಲಾಗುವುದು. ಡ್ರಗ್ಸ್ ಹಾವಳಿ ತಡೆಯಲು ಜಾಮೀನು ರಹಿತ ಕಾನೂನು ರೂಪಿಸಲಾಗುವುದು ಎಂದು, ಮುಖ್ಯಮಂತ್ರಿ ವಿವರಿಸಿದರು.

*******

ಬಾಹ್ಯಾಕಾಶ ಉದ್ಯಮಕ್ಕೆ ಸಂಬಂಧಿಸಿದಂತೆ ಎಲ್ಲ ಯೋಜನೆಗಳಲ್ಲಿ ನಾವಿನ್ಯತೆ ಹಾಗೂ ನವೋದ್ಯಮಗಳಿಗೆ ಆದ್ಯತೆ ನೀಡಲು ಸರ್ಕಾರ ಸಿದ್ಧವಿದೆ ಎಂದು, ಮಾಹಿತಿ ಮತ್ತು ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

8ನೇ ಆವೃತ್ತಿಯ, ಮೂರು ದಿನಗಳ ಅಂತಾರಾಷ್ಟ್ರೀಯ 'ಬೆಂಗಳೂರು ಬಾಹ್ಯಾಕಾಶ ಎಕ್ಸ್‌ಪೋ-2024'ಕ್ಕೆ, ಬೆಂಗಳೂರಿನಲ್ಲಿ ಚಾಲನೆ ನೀಡಿ, ಮಾತನಾಡಿದ ಅವರು, ಈ ಕ್ಷೇತ್ರದಲ್ಲಿ ಕರ್ನಾಟಕ 4ನೇ ಸ್ಥಾನ ಹೊಂದಿದ್ದು, 2030 ರ ವೇಳೆಗೆ 35 ಸಾವಿರ ಕೋಟಿ ರೂಪಾಯಿ ಹೂಡಿಕೆಯಾಗಲಿದ್ದು, ಜಾಗತಿಕ ಬಾಹ್ಯಾಕಾಶ ಮಾರುಕಟ್ಟೆಯಲ್ಲಿ, ರಾಜ್ಯಕ್ಕೆ ಉನ್ನತ ಸ್ಥಾನ ದೊರೆಯಲಿದೆ ಎಂದರು.

*******

ವಿಜಯಪುರ ಜಿಲ್ಲೆಯ ಜಿಲ್ಲಾ ಕಚೇರಿಗಳ ಸಂಕೀರ್ಣದ ಹೊಸ ಕಟ್ಟಡ ನಿರ್ಮಾಣ ಕಾಮಗಾರಿ, ಪರಿ ಷ್ಕೃತ ಅಂದಾಜಿಗೆ ಸಚಿವ ಸಂಪುಟ ಸಭೆ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ಈ ಮುಂಚೆ ಈ ಕಾಮಗಾರಿಗೆ 49 ಕೋಟಿ ಅಂದಾಜು ವೆಚ್ಚ ಪ್ರಸ್ತಾಪಿಸಲಾಗಿತ್ತು. ಈಗ ಕಟ್ಟಡದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗಲು ಹೆಚ್ಚುವರಿ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದ್ದು, ಈ ಹಿನ್ನೆಲೆ, 55.60 ಕೋಟಿ ಅಂದಾಜು ವೆಚ್ಚದ ವರದಿಗೆ ಸರಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದಿದ್ದಾರೆ.

*******

ಸ್ವಚ್ಛತೆಯೇ ಸೇವೆ ಆಂದೋಲನದಡಿ, 'ಸ್ವಭಾವ ಹಾಗೂ ಸಂಸ್ಕಾರ ಸ್ವಚ್ಛತೆ' ಧ್ಯೇಯದೊಂದಿಗೆ, ಆಯೋಜಿತ, 'ತಾಯಿಯ ಹೆಸರಿನಲ್ಲಿ ಒಂದು ಗಿಡ' ಅಭಿಯಾನಕ್ಕೆ, ದಾವಣಗೆರೆ ಜಿಲ್ಲಾ ಪಂಚಾಯ್ತಿ ಸಿ.ಇ.ಓ. ಸುರೇಶ ಇಟ್ನಾಳ್ ನಿನ್ನೆ ಚಾಲನೆ ನೀಡಿದರು.

ದಾವಣಗೆರೆ ತಾಲೂಕಿನ ಹಳೆಬಾತಿ ಗ್ರಾಮ ಪಂಚಾಯ್ತಿಯಲ್ಲಿ ಆಯೋಜಿಸಿದ್ದ, ಜಿಲ್ಲಾ ಮಟ್ಟದ ಸ್ವಚ್ಛತಾ ಅಭಿಯಾನಕ್ಕೆ, ಚಾಲನೆ ನೀಡಿ ಮಾತನಾಡಿದ ಅವರು, ಜಿಲ್ಲೆಯಲ್ಲಿ 20 ಸಾವಿರ ಗಿಡಗಳನ್ನು ನೆಡುವ ಗುರಿ ಹೊಂದಲಾಗಿದೆ ಎಂದರು.

*******

ಗ್ರಾಮದ ಸ್ವಚ್ಛತೆ ಪ್ರಥಮ ಆದ್ಯತೆ. ತ್ಯಾಜ್ಯ ವಿಂಗಡಣೆ ಹಾಗೂ ವೈಜ್ಞಾನಿಕ ವಿಲೇವಾರಿ ಕಡ್ಡಾಯ ಎಂದು, ಗದಗ ಜಿಲ್ಲೆ, ರೋಣ ತಾಲೂಕು ಪಂಚಾಯ್ತಿ ಕಾರ್ಯನಿರ್ವಹಣಾಧಿಕಾರಿ ಮಂಜುಳಾ ಹಕಾರಿ ಹೇಳಿದ್ದಾರೆ.

ರೋಣ ತಾಲೂಕಿನ ಹಿರೇಹಾಳ ಗ್ರಾಮದ ಸರಕಾರಿ ಪ್ರೌಢಶಾಲೆಯಲ್ಲಿ, 'ಸ್ವಚ್ಛತಾ ಹೀ ಸೇವಾ ಜನಾಂದೋಲನ' ಪಾಕ್ಷಿಕಕ್ಕೆ ಚಾಲನೆ ನೀಡಿ, ಮಾತನಾಡಿದ ಅವರು ರೋಣ ತಾಲೂಕಿನ ಎಲ್ಲ ಗ್ರಾಮಗಳಲ್ಲಿ, ಗಿಡ ನೆಟ್ಟು, ಹಸಿರು ಆವರಣ ಹೆಚ್ಚಿಸಲು ಯೋಜಿಸಲಾಗಿದೆ ಎಂದರು.

*******

ಗದಗ ಜಿಲ್ಲೆಯ ಶಿರಹಟ್ಟಿ ಪಟ್ಟಣದ ಕಿತ್ತೂರು ರಾಣಿ ಚನ್ನಮ್ಮ ಬಾಲಕಿಯರ ವಸತಿ ಶಾಲೆಯ ಆವರಣದಲ್ಲಿ, 'ತಾಯಿಯ ಹೆಸರಿನಲ್ಲಿ ಒಂದು ಗಿಡ" ಸಸಿ ನೆಡುವ ಕಾರ್ಯಕ್ರಮ ಜರುಗಿತು.

*******

ನೈಋತ್ಯ ರೈಲ್ವೆ ಹುಬ್ಬಳ್ಳಿ ವಿಭಾಗ, 'ಸ್ವಚ್ಛತಾ ಹೀ ಸೇವಾ' ಅಭಿಯಾನದ ಅಡಿ, ಎರಡು ವಾರಗಳ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಿದೆ.

ಹುಬ್ಬಳ್ಳಿ ರೈಲ್ವೆ ನಿಲ್ದಾಣದಲ್ಲಿ ಸಿಬ್ಬಂದಿಗೆ, ಸ್ವಚ್ಛತಾ ಪ್ರತಿಜ್ಞೆ ಬೋಧಿಸಲಾಯಿತು. ಅಧಿಕಾರಿಗಳು ಮತ್ತು ಸಿಬ್ಬಂದಿ ರೈಲ್ವೆ ನಿಲ್ದಾಣದ ಆವರಣದಲ್ಲಿ, ಸ್ವಚ್ಛತಾ ಕಾಮಗಾರಿ ನಡೆಸಿದರು. 'ಏಕ್ ಪೇಢ್ ಮಾ ಕೇ ನಾಮ್' ಹೆಸರಿನಲ್ಲಿ, ಸಸಿಗಳನ್ನು ನೆಡಲಾಯಿತು.

*******

"ಏಕ್ ಪೇಢ್ ಮಾ ಕೆ ನಾಮ್" ಅಭಿಯಾನದಡಿ, ಸಸಿ ನೆಡುವ ಕಾರ್ಯಕ್ರಮ ಹಾಗೂ 'ಸ್ವಚ್ಛತಾ ಹೀ ಸೇವಾ ಪಾಕ್ಷಿಕ' ಅಭಿಯಾನದಡಿ, ಆಕಾಶವಾಣಿ ಭದ್ರಾವತಿ ಕೇಂದ್ರದ ಆವರಣದಲ್ಲಿ ಸ್ವಚ್ಛತಾ ಕಾರ್ಯಕ್ರಮ, ಜರುಗಿತು.

ಶಿವಮೊಗ್ಗ ಕ್ಷೇತ್ರದ ಸಂಸದ ಬಿ.ವೈ.ರಾಘವೇಂದ್ರ ಕಾರ್ಯಕ್ರಮ ಉದ್ಘಾಟಿಸಿ, ಸ್ವಚ್ಛತಾ ಅಭಿಯಾನದಲ್ಲಿ ಪಾಲ್ಗೊಂಡು, ಆಕಾಶವಾಣಿ ಕೇಂದ್ರದ ಆವರಣದಲ್ಲಿ ಸಸಿ ನೆಟ್ಟರು.

ಶಿವಮೊಗ್ಗ ಕ್ಷೇತ್ರದ ವಿಧಾನಪರಿಷತ್ ಸದಸ್ಯ ಧನಂಜಯ ಸರ್ಜಿ ಸೇರಿದಂತೆ ಆಕಾಶವಾಣಿ ಅಧಿಕಾರಿಗಳು, ಸಿಬ್ಬಂದಿ ಪಾಲ್ಗೊಂಡಿದ್ದರು.

*******

ಗೃಹಲಕ್ಷ್ಮೀ ಸೇರಿದಂತೆ, ಪಂಚ ಖಾತ್ರಿ ಯೋಜನೆಗಳಿಂದ, ರಾಜ್ಯದ ಒಬ್ಬ ಅರ್ಹ ಫಲಾನುಭವಿಯೂ ಹೊರಗುಳಿಯಬಾರದು ಎಂಬ ಸದುದ್ದೇಶದಿಂದ, ಗ್ರಾಮ ಪಂಚಾಯ್ತಿ ಮಟ್ಟದಲ್ಲಿ, ನೋಡಲ್ ಅಧಿಕಾರಿಯನ್ನು ನೇಮೀಸಲಾಗುವುದು ಎಂದು, ಗ್ಯಾರಂಟಿ ಯೋಜನೆಗಳ ಅನು ∝ನ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷೆ ಪು ∝ ಅಮರನಾಥ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿ ಮೊದಲ ಬಾರಿಗೆ, ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ದಕ್ಷಿಣಕನ್ನಡ ಜಿಲ್ಲೆಯಲ್ಲಿ, ಒಟ್ಟು 4 ಲಕ್ಷ 3 ಸಾವಿರದ 333 ಮಹಿಳೆಯರ ಪೈಕಿ, 3 ಲಕ್ಷ 69 ಸಾವಿರದ 292 ಜನರಿಗೆ, ಮಾಸಿಕ 2 ಸಾವಿರ ರೂಪಾಯಿ ತಲುಪುತ್ತಿದೆ ಎಂದು ಹೇಳಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

*******

ಕೇಂದ್ರದ ಪ್ರಸಕ್ತ ಮುಂಗಡಪತ್ರದಲ್ಲಿ ಘೋಷಿಸಿದ್ದ, ಎನ್.ಪಿ.ಎಸ್. ವಾತ್ಸಲ್ಯ ರಾಷ್ಟ್ರೀಯ ಪಿಂಚಣಿ ಯೋಜನೆಗೆ, ಕೇಂದ್ರ ಹಣಕಾಸು ಖಾತೆ ಸಚಿವೆ ನಿರ್ಮಲಾ ಸೀತಾರಾಮನ್ ನಿನ್ನೆ ಚಾಲನೆ ನೀಡಿದರು.

ದಿಲ್ಲಿಯಲ್ಲಿ ಪ್ರಧಾನ ಕಾರ್ಯಕ್ರಮ ಆಯೋಜಿಸಲಾಗಿತ್ತು. ಬೆಂಗಳೂರು, ಮೈಸೂರು, ಹುಬ್ಬಳ್ಳಿ ಸೇರಿದಂತೆ 75 ಕೇಂದ್ರಗಳಿಂದ ಏಕಕಾಲಕ್ಕೆ ಯೋಜನೆಗೆ ಚಾಲನೆ ದೊರೆಯಿತು.

ಈ ಯೋಜನೆಯಡಿ ಅಪ್ರಾಪ್ತ ಮಕ್ಕಳ ಹೆಸರಿನಲ್ಲಿ ಪೋಷಕರು ದೀರ್ಘ ಅವಧಿವರೆಗೆ ಹಣ ತೊಡಗಿಸಿ, ಅದರ ಪ್ರಯೋಜನ ಪಡೆದುಕೊಳ್ಳಬಹುದಾಗಿದೆ. ಅಪ್ರಾಪ್ತರ ಹೆಸರಿನಲ್ಲಿರುವ ಖಾತೆಯನ್ನು, ಅವರಿಗೆ 18 ವರ್ಷ ತುಂಬಿದ ನಂತರ, ನಿಯಮಿತ ಎನ್.ಪಿ.ಎಸ್. ಖಾತೆಯನ್ನಾಗಿ ಪರಿವರ್ತಿಸಬಹುದು.

*******

ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಿಗೆ, ಏಕಕಾಲದಲ್ಲಿ ಚುನಾವಣೆ ನಡೆಸುವ, 'ಒಂದು ದೇಶ-ಒಂದು ಚುನಾವಣೆ' ಕುರಿತ, ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಸಮಿತಿಯ ವರದಿಗೆ, ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ.

ಸಚಿವ ಸಂಪಟದ ಸಭೆ ಬಳಿಕ, ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಹೊಸ ದಿಲ್ಲಿಯಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿ, ಏಕಕಾಲದಲ್ಲಿ ಚುನಾವಣೆ ನಡೆಸುವುದರಿಂದ, ಅನಗತ್ಯ ವೆಚ್ಚ ಕಡಿಮೆಯಾಗಲಿದೆ. ಮುಂದಿನ 5 ವರ್ಷಗಳಲ್ಲಿ ಲೋಕಸಭೆ ಮತ್ತು ವಿಧಾನಸಭೆ ಚುನಾವಣೆಗಳು ಏಕಕಾಲದಲ್ಲಿ ನಡೆಸಲು ವರದಿ ಶಿಫಾರಸು ಮಾಡಿದೆ ಎಂದು, ತಿಳಿಸಿದರು.

*******

ಡಿಸೆಂಬರ್ 20, 21 ಹಾಗೂ 22 ರಂದು ಮಂಡ್ಯದಲ್ಲಿ ಆಯೋಜಿತ ಅಖಿಲ ಭಾರತ 87ನೇ ಕನ್ನಡ ಸಾಹಿತ್ಯ ಸಮ್ಮೇಳನದ, ಸರ್ವಾಧ್ಯಕ್ಷರ ಆಯ್ಕೆ ಸದ್ಯದಲ್ಲೇ ನಡೆಯಲಿದೆ ಎಂದು ಮಂಡ್ಯದಲ್ಲಿ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷ ಮಹೇಶ ಜೋಶಿ ತಿಳಿಸಿದ್ದಾರೆ.

*******

ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ, 'ವಾರ್ಷಿಕ ಉತ್ತರೋತ್ತರ ಪ್ರಶಸ್ತಿ'ಗೆ ಮೂವರು ಸಾಧಕರು ಆಯ್ಕೆಯಾಗಿದ್ದಾರೆ ಎಂದು, ವಿಶ್ವವಿದ್ಯಾಲಯದ ಉಪ ಕುಲಪತಿ ಪ್ರೊಫೆಸರ್ ನಿರಂಜನ ವಾನಳ್ಳಿ ತಿಳಿಸಿದ್ದಾರೆ.

ಉತ್ತರ ವಿಶ್ವವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಅಂಗವಾಗಿ, ಕೋಲಾರದ ಕವಿ, ನಾಟಕಕಾರ ಕೋಟಿಗಾನಹಳ್ಳಿ ರಾಮಯ್ಯ, ಶ್ರೀನಿವಾಸಪುರ ತಾಲೂಕಿನ ಸಿರಿಧಾನ್ಯ ಸಂರಕ್ಷಕಿ ರತ್ನಮ್ಮ ಹಾಗೂ ಲಿಂಗತ್ವ ಅಲ್ಪ ಸಂಖ್ಯಾತ ಸಮುದಾಯದ ಹಕ್ಕುಗಳ, ಸಾಮಾಜಿಕ ಹೋರಾಟಗಾರ್ತಿ ಅಕ್ಕೈ ಪದ್ಮಶಾಲಿ ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ನಾಳೆ, ಮಂಗಸಂದ್ರದ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ಜರುಗಲಿದೆ.

*******

ಕೋಲಾರ ಜಿಲ್ಲೆ, ಮುಳಬಾಗಿಲು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ, 700 ವಿದ್ಯಾರ್ಥಿಗಳಿಗೆ, ಮನೆ–ಮದ್ದು ಹಾಗೂ ಉಪನ್ಯಾಸಕರಿಗೆ ಆಯುರ್ವೇದ ಗಿಡಮೂಲಿಕೆಗಳ ಸಂರಕ್ಷಣೆ ಮತ್ತು ಉಪಯೋಗಗಳ ಬಗ್ಗೆ, ವಿಶೇಷ ಕ್ಷೇತ್ರಕಾರ್ಯ ನಡೆಸಲಾಯಿತು.

ಪಾರಂಪರಿಕ ವೈದ್ಯರು ಹಾಗೂ ಜಿಲ್ಲಾ ಪಂಚಾಯ್ತಿ ಜೀವಿ ವೈವಿಧ್ಯ ನಿರ್ವಹಣಾ ಸಮಿತಿ ಸದಸ್ಯ ಹರೀಶ್ ಬಾಬು, ಪ್ರಾತ್ಯಕ್ಷಿಕೆ ನೀಡಿದರು.

*******

ಈಗ ಸಂಕ್ಷಿಪ್ತ ಸುದ್ದಿಗಳು:

ಮತದಾರರ ಪಟ್ಟಿ ಪರಿಷ್ಕರಣೆ ಹಿನ್ನೆಲೆ, ಬಾಗಲಕೋಟೆ ಜಿಲ್ಲೆ, ಹುನಗುಂದ ತಾಲೂಕಿನ ಐಹೊಳೆ ಮತ್ತು ರಾಮಥಾಳ ಗ್ರಾಮಕ್ಕೆ, ಜಿಲ್ಲಾಧಿಕಾರಿ ಕೆ.ಎಂ.ಜಾನಕಿ ಭೇಟಿ ನೀಡಿ, ಮನೆ ಮನೆ ಸಮೀಕ್ಷೆ ಕಾರ್ಯ ಹಾಗೂ ಆಧಾರ ಜೋಡಣೆ ಪರಿಶೀಲಿಸಿದರು. (25)

ಶಿವಮೊಗ್ಗದ, ಹಿಂದೂ ಸಂಘಟನಾ ಮಹಾಮಂಡಳಿ ಪ್ರತಿಷ್ಠಾಪಿಸಿದ್ದ, 80ನೇ ವ ‍್ಷದ ಸಾರ್ವಜನಿಕ ಗಣಪತಿ ವಿಗ್ರಹದ ವಿಸರ್ಜನಾ ಪೂರ್ವದ ಭವ್ಯ ಮೆರವಣಿಗೆ, ನಗರದ ಪ್ರಮುಖ ಬೀದಿಗಳಲ್ಲಿ ಅದ್ದೂರಿಯಾಗಿ ನಡೆಯಿತು. (32)

11ನೇ ದಿನದ ಸಾರ್ವಜನಿಕ ಗಣೇಶ ವಿಗ್ರಹಗಳ ವಿಸರ್ಜನೆ ಹಿನ್ನೆಲೆ, ಹುಬ್ಬಳ್ಳಿಯ ದಾಜೀಬಾನ ಪೇಟೆ, ಮೇದಾರ ಓಣಿ ಸೇರಿದಂತೆ, ಪ್ರಮುಖ ವಿಗ್ರಹಗಳ ಮೆರವಣಿಗೆ, ಬೆಳಗಿನ ಜಾವದವರೆಗೆ, ಪೊಲೀಸ್ ಬಿಗಿ ಬಂದೋಬಸ್ತ್‌ನಲ್ಲಿ, ಸಂಭ್ರಮದಿಂದ ನಡೆಯಿತು.

ಮಂಡ್ಯ ಜಿಲ್ಲೆ, ನಾಗಮಂಗಲದ ಗಲಭೆ ಪ್ರಕರಣಕ್ಕೆ ಸಂಬಂಧಿಸಿ, 55 ಮಂದಿ ಆರೋಪಿಗಳನ್ನು ಬಂಧಿಸಲಾಗಿದೆ; ಗಲಭೆಯಲ್ಲಿ ನಾಲ್ಕೂವರೆ ಕೋಟಿ ರೂಪಾಯಿ ಮೌಲ್ಯದ ಆಸ್ತಿ ನ ಷ್ಟವಾಗಿದೆ ಎಂದು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ತಿಳಿಸಿದ್ದಾರೆ. (38)

ಧಾರವಾಡ ಜಿಲ್ಲೆಯಲ್ಲಿ, 15 ಬಾಲ್ಯ ವಿವಾಹ ಪ್ರಕರಣಗಳು ದಾಖಲಾಗಿದ್ದು, 14 ಬಾಲ್ಯ ವಿವಾಹಗಳನ್ನು ತಡೆಯಲಾಗಿದೆ. ಒಂದು ಪ್ರಕರಣದಲ್ಲಿ ಎಫ್.ಐ.ಆರ್ ದಾಖಲಾಗಿದೆ. 335 ಕೌಟುಂಬಿಕ ದೌರ್ಜನ್ಯ ಪ್ರಕರಣಗಳು ದಾಖಲಾಗಿವೆ.

ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಯೋಜನೆ, 1 ವ ರ್ಷದಿಂದ 19 ವ ರ್ಷದೊಳಗಿನ ಎಲ್ಲ ಮಕ್ಕಳ, ಉನ್ನತ ಮಟ್ಟದ ತಪಾಸಣೆ ಹಾಗೂ ಉಚಿತ ಚಿಕಿತ್ಸೆಗೆ ಸಹಕಾರಿಯಾಗಿದೆ ಎಂದು, ಚಿತ್ರದುರ್ಗ ತಾಲೂಕು ಆರೋಗ್ಯಾಧಿಕಾರಿ ಡಾಕ್ಟರ್ ಬಿ.ವಿ. ಗಿರೀಶ ತಿಳಿಸಿದ್ದಾರೆ. (02)

ಅಂತಾರಾಷ್ಟ್ರೀಯ ಶಾಂತಿ ದಿನಾಚರಣೆ, ಇದೇ 21 ರಂದು ಶನಿವಾರ ಜರುಗಲಿದ್ದು, ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ, ಕಾಲ್ನಡಿಗೆ ಜನ ಜಾಗ್ರತಿ ಜಾಥಾ ಆಯೋಜಿಸಲಾಗಿದೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಮಾದಕ ಪದಾರ್ಥಗಳ ಮಾರಾಟ ಜಾಲದ ಮೂಲೋತ್ಪಾಟನೆಗೆ, ತುರ್ತು ಕಾರ್ಯಪಡೆ ರಚನೆ – ಮುಖ್ಯಮಂತ್ರಿ ಸಿದ್ದರಾಮಯ್ಯ.

ಬಾಹ್ಯಾಕಾಶ ಉದ್ಯಮ ಯೋಜನೆಗಳಲ್ಲಿ, ನವೋದ್ಯಮಗಳಿಗೆ ಆದ್ಯತೆ – ಮಾಹಿತಿ ಮತ್ತು ತಂತ್ರಜ್ಞಾನ ಖಾತೆ ಸಚಿವ, ಪ್ರಿಯಾಂಕ್ ಖರ್ಗೆ.

ಸ್ವಚ್ಛತೆಯೇ ಸೇವೆ ಆಂದೋಲನ; ರಾಜ್ಯದ ವಿವಿಧೆಡೆ ಪಾಕ್ಷಿಕ ಅಭಿಯಾನಕ್ಕೆ ಚಾಲನೆ.

'ಒಂದು ದೇಶ–ಒಂದು ಚುನಾವಣೆ', 'ಕೋವಿಂದ್ ಸಮಿತಿ ವರದಿ'ಗೆ, ಕೇಂದ್ರ ಸಚಿವ ಸಂಪುಟ ಅನುಮೋದನೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.
ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

******